೭. ಶಾಸನ ರಚನೆ

ಅ. ವಿಧೇಯಕಗಳನ್ನು ಮಂಡಿಸುವುದು

(ಅ) ೨೦೦೧ನೇ ಸಾಲಿನ ವಿದ್ಯುಚ್ಛಕ್ತಿ(ಕರ್ನಾಟಕ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ.ಚಂದ್ರೇಗೌಡ: (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೇ, ''2001ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

''2001ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಮಾನ್ಯ ಅಧ್ಯಕ್ಷರೇ, ''2001ನೇ ಸಾಲಿನ ವಿದ್ಯುಚ್ಛಕ್ತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

(ಆ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, ೨೦೦೧

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2001 ಮಂಡನೆ ಅನುಮತಿ ಕೋರಿಕೆ

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ''2001ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ

X - ಅನುಬಂಧ -II

ಅನುಮತಿ ಕೋರುತ್ತೇನೆ.''

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, ''2001ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, '2001ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು' ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ X

(ಇ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ, ೨೦೦೧ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು, ಸಾರಿಗೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ''2001ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು'' ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ ''2001ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ''ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಮಾನ್ಯ ಅಧ್ಯಕ್ಷರೆ, ''2001ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು'' ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

X - ಅನುಬಂಧ -III, IV